ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 15ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ದಿನಾಂಕ 11.12.2014ರ ಮೂರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಎಸ್.ಟಿ.ಸೋಮಶೇಖರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 31(1115) : ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

2. ಶಾಸನ ರಚನೆ

I. <u>ವಿಧೇಯಕಗಳನ್ನು ಮಂಡಿಸುವುದು</u>

(i) **ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ)ವಿಧೇಯಕ, 2014**
ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) **ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ)ವಿಧೇಯಕ, 2014**
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.,

(iii) **ಭಾರತ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕ, 2014**
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಭಾರತ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. <u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>

1. ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2014
ಡಾ|| ಖಮರುಲ್ ಇಸ್ಲಾಂ(ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಕರ್ನಾಟಕ ಶಿಕ್ಷಣ(ತಿದ್ದುಪಡಿ) ವಿಧೇಯಕ, 2014
ಶ್ರೀ ಕಿಮ್ಮನೆ ರತ್ನಾಕರ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಶಿಕ್ಷಣ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2014
ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು:-
ಅ) 2014ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು

4. ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ(ತಿದ್ದುಪಡಿ) ವಿಧೇಯಕ, 2014
ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು) ಅವರು:
ಅ) 2014ನೇ ಸಾಲಿನ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.,

೭. ಕರ್ನಾಟಕ ಕಾಕಂಬಿ ನಿಯಂತ್ರಣ ವಿಧೇಯಕ, 2014
ಶ್ರೀ ಸತೀಶ್ ಜಾರಕಿಹೊಳಿ (ಅಬಕಾರಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಶಿಕ್ಷಣ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು

೩. ಗಮನ ಸೆಳೆಯುವ ಸೂಚನೆಗಳು

1. ಶ್ರೀ ತುಕಾರಾಂ. ಈ ಅವರು ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಕಳೆದ 10-11 ವರ್ಷಗಳಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರಾಗಿ/ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.
2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆಯ, ಮಡಿಕೇರಿ ತಾಲ್ಲೂಕು, ಕುಂಜಿಲ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಾದ ನಾಲಡಿ, ಯಮಕಪಾಡಿ, ಪಾಲಂಗಾಲ ಗ್ರಾಮಗಳ ವ್ಯಾಪ್ತಿಯಲ್ಲಿನ ಏಲಕ್ಕಿ ಮಲೆಯ ಜಾಗವನ್ನು ಅರಣ್ಯ ಇಲಾಖೆಯ ವಶಕ್ಕೆ ಬಿಟ್ಟು ಕೊಡುವ ಹಾಗೂ ಇದಕ್ಕೆ ಪರಿಹಾರ ಕೋರಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.
3. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಕಳಸ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು NRDWP ಯೋಜನೆ ಅಡಿಯಲ್ಲಿನ ಕಾಮಗಾರಿಯು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
4. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.
5. ಶ್ರೀ ಮಂಜುನಾಥ ಗೌಡ ಕೆ.ಎಸ್. ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಕಾಚರಕನಹಳ್ಳಿ ಮತ್ತು ಕೋಡಿಹಳ್ಳಿ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸದಿರುವುದರಿಂದ ಆ ಭಾಗದ ರೈತರುಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.
6. ಶ್ರೀ ಗೋವಿಂದ ಎಂ. ಕಾರಜೋಳ ಅವರು ವಿಜಯಪುರ ಜಿಲ್ಲೆ ಮತ್ತು ತಾಲ್ಲೂಕಿನ ಮಕಣಾಪುರ ಗ್ರಾಮದ ಹಲವು ದಲಿತ ಕುಟುಂಬದವರನ್ನು ಒಕ್ಕಲೆಬ್ಬಿಸಿ, ವಶಪಡಿಸಿಕೊಂಡಿರುವ ಜಮೀನನ್ನು ಅವರಿಗೆ ಹಿಂದಿರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

7. ಶ್ರೀಮತಿ ವಿನಿಶಾ ನೆರೊ ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಹೊಸದಾಗಿ ನಿರ್ಮಿಸಿರುವ ಮೇಲ್‌ಸೇತುವೆಗಳ ಕೆಳಭಾಗದ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ನಿರ್ವಹಿಸದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
8. ಶ್ರೀ ಪ್ರಸನ್ನಕುಮಾರ್ ಕೆ.ಬಿ. ಅವರು ಶಿವಮೊಗ್ಗ ತಾಲ್ಲೂಕಿನ ಸರ್ವೆ ನಂ.1 ರಲ್ಲಿ ೬೦೦ಎಕರೆ ಪ್ರದೇಶದಲ್ಲಿ ಉಳಿದಿರುವ 404 ಎಕರೆ ಖಾಲಿ ಪ್ರದೇಶದಲ್ಲಿ ಕೈಗಾರಿಕೋದ್ಯಮಿಗಳಿಗೆ ಅನುಕೂಲವಾಗುವಂತೆ 250 ಎಕರೆ ಪ್ರದೇಶವನ್ನು "S.E.Z" "ಕೈಗಾರಿಕಾ ವಸಾಹತು"ವನ್ನಾಗಿ ಮೀಸಲಿರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
9. ಶ್ರೀ ಪಿ. ರಾಜೀವ್ ಅವರು ಬೆಳಗಾವಿ ಜಿಲ್ಲೆ ನಗರಾಭಿವೃದ್ಧಿ ಪ್ರಾಧಿಕಾರವು ಹೊರಡಿಸಿರುವ ನಕಾಶೆಯಲ್ಲಿ ಸುಮಾರು 33 ಸಾವಿರ ಎಕರೆ ಫಲವತ್ತಾದ ನೀರಾವರಿ ಭೂಮಿಯನ್ನು ಖರಾಬು ಭೂಮಿ ಎಂದು ನಮೂದಿಸಿರುವುದರ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.
10. ಶ್ರೀಯುತರುಗಳಾದ ಸಿ. ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಅವರುಗಳು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಹಾಸನ ತಾಲ್ಲೂಕುಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಿರುವುದರಿಂದ 353 ಕೊಳವೆ ಬಾವಿ ಕಾಮಗಾರಿಗಳಿಗೆ ಅನುಮೋದನೆ ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
11. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ವೈ.ಎಸ್.ವಿ.ದತ್ತಾ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಸುಧಾಕರ್‌ಲಾಲ್ ಮತ್ತು ಇತರರು ರಾಜ್ಯದಲ್ಲಿ ಜಿಲ್ಲಾ ಪಂಚಾಯತ್‌ಗಳ ಮೂಲಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತ ಮಾಡುತ್ತಿದ್ದು, ಇದಕ್ಕೆ ಸಂಬಂಧಪಟ್ಟಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಆಯಾ ಕ್ಷೇತ್ರದ ಶಾಸಕರ ಅನುಮೋದನೆಯನ್ನು ಪಡೆಯದೆ ಅನುದಾನವನ್ನು ದುರ್ಬಳಕೆ ಮಾಡುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
12. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎನ್. ಚಲುವರಾಯಸ್ವಾಮಿ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ಇತರರು ರಾಜ್ಯದಲ್ಲಿ ರೈತರು ಬೆಳೆದ ಭತ್ತಕ್ಕೆ ಸರಿಯಾದ ಬೆಲೆ ಸಿಗದಿರುವುದರಿಂದ ರೈತರಿಗೆ ನಷ್ಟವುಂಟಾಗುತ್ತಿರುವ ವಿಷಯದ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.
13. ಶ್ರೀ ಎಸ್.ಆರ್.ವಿಶ್ವನಾಥ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 18 ಕಿ.ಮೀ ವ್ಯಾಪ್ತಿಯಲ್ಲಿರುವ ಸರ್ಕಾರಿ ಭೂಮಿಯಲ್ಲಿ ಕಟ್ಟಿರುವ ಮನೆಗಳನ್ನು ಭೂ ಸುಧಾರಣಾ ಕಾಯ್ದೆಯ ಕಲಂ 94 ಸಿ ರಡಿ ಸಕ್ರಮಗೊಳಿಸುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
14. ಶ್ರೀ ಕೆ. ಎಂ. ಕೃಷ್ಣಾರೆಡ್ಡಿ ಅವರು ಚಿಂತಾಮಣಿ ತಾಲ್ಲೂಕಿನಾದ್ಯಂತ 191 ಕೊಳವೆ ಬಾವಿಗಳಲ್ಲಿ 81 ಕೊಳವೆ ಬಾವಿಗಳು ವಿಫಲವಾಗಿರುವುದರಿಂದ, ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

15. ಶ್ರೀ ವೈ.ಎನ್. ರುದ್ರೇಶಗೌಡ ಅವರು ಸಣ್ಣ ರೈತರು 50 ವರ್ಷಗಳಿಂದ ಉಳುಮೆ ಮಾಡುತ್ತಿರುವ ಭೂಮಿಯನ್ನು ಕಂದಾಯ ಇಲಾಖೆಯ ಅಧಿಕಾರಿಗಳು ಒತ್ತುವರಿ ಹೆಸರಿನಲ್ಲಿ ತೆರವುಗೊಳಸುತ್ತಿರುವುದರಿಂದ ಸಣ್ಣ ರೈತರಿಗೆ ತೊಂದರೆಯಾಗಿರುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
16. ಶ್ರೀ ಸಂಜಯ ಬಿ. ಪಾಟೀಲ್ ಅವರು ರಾಜ್ಯದಲ್ಲಿ ಹೊಸ ನೇಕಾರರ ಕಾಲೋನಿಗಳನ್ನು ನಿರ್ಮಿಸುವ ಹಾಗೂ ಆ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.
17. ಶ್ರೀ ಎಂ.ಟಿ. ಕೃಷ್ಣಪ್ಪ ಅವರು ಅಬಕಾರಿ ಪರವಾನಗಿ ಮಂಜೂರು ಮಾಡಿದ ಸ್ಥಳಗಳಲ್ಲಿ ಉದ್ದೇಶಪೂರ್ವಕವಾಗಿ ದೇವಸ್ಥಾನ ಹಾಗೂ ಶಾಲೆಗಳನ್ನು ನಿರ್ಮಾಣ ಮಾಡಿರುವುದರಿಂದ, ಮದ್ಯದ ಅಂಗಡಿಗಳನ್ನು ಸ್ಥಳಾಂತರಿಸಲು ಹೊಸ ಪರವಾನಗಿ ನೀಡುವ ಬಗ್ಗೆ ಅಬಕಾರಿ ಸಚಿವರ ಗಮನ ಸೆಳೆಯುವುದು.
18. ಶ್ರೀ ಜೆ.ಟಿ. ಪಾಟೀಲ್ ಅವರು 1ನೇ ತರಗತಿಯಿಂದ 12ನೇ ತರಗತಿಯವರೆಗೆ ಶಾಲಾ ಕಾಲೇಜುಗಳಲ್ಲಿ ಯೋಗಾಭ್ಯಾಸವನ್ನು ಕಡ್ಡಾಯಗೊಳಿಸುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.
19. ಶ್ರೀ ಎಸ್. ಭೀಮನಾಯ್ಕ ಅವರು ಬಳ್ಳಾರಿ ಜಿಲ್ಲೆ, ಹೊಸಪೇಟೆ ತಾಲ್ಲೂಕು, ಹಗರಿಬೊಮ್ಮನಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮರಿಯಮ್ಮನಹಳ್ಳಿ ಪೋಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ವಿಫಲವಾಗಿರುವ ಬಗ್ಗೆ ಗೃಹ ಸಚಿವರ ಗಮನ ಸೆಳೆಯುವುದು.
20. ಶ್ರೀ ಜಿ.ಎಸ್. ಪಾಟೀಲ್ ಅವರು 2011 –12ರಿಂದ 2013–14ನೇ ಸಾಲುಗಳಲ್ಲಿ ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಯ ಸಹಕಾರಿ ಸಂಘಗಳಿಂದ ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಹಾಗೂ ಶೂನ್ಯ ಬಡ್ಡಿ ದರದಲ್ಲಿ ಸಾಲ ವಿತರಣೆ ಮಾಡಿರುವ ಅಂಕಿ ಅಂಶಗಳ ಬಗ್ಗೆ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.
21. ಶ್ರೀ ಅರವಿಂದ ಲಿಂಬಾವಳಿ ಅವರು ಪ್ರತಿ ಆರೋಗ್ಯ ಕೇಂದ್ರಕ್ಕೆ ಒಬ್ಬ ವೈದ್ಯರನ್ನು ನೇಮಿಸುವಂತೆ ಜುಲೈ 18ರಂದು ಹೊರಡಿಸಿರುವ ಸರ್ಕಾರದ ಆದೇಶದಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.
22. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ವಿಜಯಪುರ ಮಹಾನಗರ ಪಾಲಿಕೆಯ ವ್ಯಾಪ್ತಿಯ ನಗರದ ಮಧ್ಯಭಾಗದಲ್ಲಿರುವ ಹಳೆಯ ಅಗ್ನಿಶಾಮಕ ನಿಲುಗಡೆ ಸ್ಥಳದಲ್ಲಿ ಅಕ್ರಮವಾಗಿ ಹಾಲು ಮಾರಾಟ ಮಾಡಲು ಮಳಿಗೆಗಳನ್ನು ಗುತ್ತಿಗೆ ಆಧಾರದ ಮೇಲೆ ನೀಡಿರುವ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು
23. ಶ್ರೀ ಎನ್. ಚಲುವರಾಯಸ್ವಾಮಿ ಅವರು ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಾಗಮಂಗಲ ತಾಲ್ಲೂಕಿನ ಕದಬಹಳ್ಳಿ ಬಳಿ ಅಂಡರ್‌ಪಾಸ್ ಮತ್ತು ಸರ್ವೀಸ್ ರಸ್ತೆ ನಿರ್ಮಿಸುವ ಬಗ್ಗೆ ಹಾಗೂ ಬೆಳ್ಳೂರು ಕ್ರಾಸ್ ನಂತರ ಟೋಲ್ ಪ್ಲಾಜಾವನ್ನು ನಿರ್ಮಿಸುವುದರ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
24. ಶ್ರೀ ವಿ. ಸುನೀಲ್‌ಕುಮಾರ್ ಅವರು ಮಂಗಳೂರಿನ ಉಳಾಯಿಬೆಟ್ಟು ಎಂಬಲ್ಲಿ ದತ್ತಮಾಲಾಧಾರಿಗಳು ಪ್ರಯಾಣಿಸುತ್ತಿದ್ದ ವಾಹನದ ಮೇಲೆ ಕಲ್ಲುತೂರಾಟ ಮಾಡಿದ್ದರ ವಿರುದ್ಧ ಪ್ರತಿಭಟಿಸಿದ ಪ್ರತಿಭಟನಾಕಾರರ ಮೇಲೆ ಪೋಲೀಸರು ಲಾಠಿ ಪ್ರಹಾರ ಮಾಡಿರುವ ಬಗ್ಗೆ ಗೃಹ ಸಚಿವರ ಗಮನ ಸೆಳೆಯುವುದು.

25. ಶ್ರೀ ರಾಮಕೃಷ್ಣ ಶಿ ದೊಡ್ಡಮನಿ ಅವರು ಶಿರಹಟ್ಟಿ ಮತಕ್ಷೇತ್ರದ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಅಭಿವೃದ್ಧಿಗೆ ಹಾಗೂ ಇತರೆ ದೇವಸ್ಥಾನಗಳ ಅಭಿವೃದ್ಧಿಗೆ ನೀಡಿರುವ ಅನುದಾನದ ಬಗ್ಗೆ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೆ.ಜಿ.ಬೋಪಯ್ಯ, ಸಿ.ಟಿ.ರವಿ, ವಿ.ಸುನೀಲ್‌ಕುಮಾರ್ ಹಾಗೂ ಇತರರು ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತು ಡಾ॥ ಕಸ್ತೂರಿ ರಂಗನ್ ನೀಡಿರುವ ವರದಿ ಅನುಷ್ಠಾನದಿಂದಾಗಿ ಪಶ್ಚಿಮ ಘಟ್ಟಗಳಿಗೆ ಹೊಂದಿಕೊಂಡಿರುವ ಜಿಲ್ಲೆಗಳ ಜನರಿಗೆ ಅನ್ಯಾಯವಾಗದಂತೆ ಅವರನ್ನು ಒಕ್ಕಲೆಬ್ಬಿಸದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚೆ.
2. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ವೈ.ಎನ್. ರುದ್ರೇಶ್‌ಗೌಡ ಮತ್ತು ಹೆಚ್.ಡಿ. ಕುಮಾರಸ್ವಾಮಿ ಅವರುಗಳು ರಾಜ್ಯದ ಬಹುಹಳ್ಳಿ ಕುಡಿಯುವ ನೀರಿನ ಡಿಬಿಒಟಿ ವ್ಯವಸ್ಥೆಯಲ್ಲಿ ಅರಸೀಕೆರೆ ತಾಲ್ಲೂಕಿನ 477 ಹಳ್ಳಿಗಳಿಗೆ ಟೆಂಡರ್ ಪ್ರಕ್ರಿಯೆ ಹಾಗೂ ಶಂಕು ಸ್ಥಾಪನೆ ಮುಗಿದಿದ್ದರೂ ಕಾರ್ಯರೂಪಕ್ಕೆ ಬಾರದಿರುವ ಬಗ್ಗೆ ಚರ್ಚೆ.
3. ಶ್ರೀಯುತರುಗಳಾದ ಕೆ.ಎಸ್.ಪುಟ್ಟಣ್ಣಯ್ಯ, ಎಂ.ರಾಜಣ್ಣ ಮತ್ತು ಉಮೇಶ್ ವಿ. ಕತ್ತಿ ಅವರುಗಳು ಸುವರ್ಣ ಗ್ರಾಮ ಯೋಜನೆಯ ಬದಲಾಗಿ ವಿಕಾಸ ಗ್ರಾಮ ಯೋಜನೆಯನ್ನು ಜಾರಿಗೆ ತಂದಿರುವುದರಿಂದ ಗ್ರಾಮಾಂತರ ಪ್ರದೇಶ ಜನರಿಗೆ ಮೂಲಭೂತ ಸೌಕರ್ಯಗಳು ದೊರೆಯದಿರುವ ಬಗ್ಗೆ ಚರ್ಚೆ.
4. ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚೆ.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)